# <u>ಮಂಗಳೂರು ವಿಶ್ವವಿದ್ಯಾನಿಲಯ</u>

ದಿನಾಂಕ 21.06.2024 ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2024ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಗಳು.

**ಉಪಸ್ಥಿತರು:**

| **ಕ್ರ.ಸಂ.** | | | **ಸಹಿ** |
|---|---|---|---|
| 1. | ಪ್ರೊ. ಪಿ. ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ರಾಮೇ ಗೌಡ ಎಂ.,<br>ಜಂಟಿ ನಿರ್ದೇಶಕರು, (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಎಂ. ಜಯಶಂಕರ್<br>ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ | ಸದಸ್ಯರು | |
| 4. | ಡಾ. ಎಸ್. ಬಿ. ಎಂ. ಪ್ರಸನ್ನ | ಸದಸ್ಯರು | |
| 5. | ಡಾ. ಕೆ. ಸಿ. ಮಹದೇಶ | ಸದಸ್ಯರು | |
| 6. | ಡಾ. ಶಂಕರಮೂರ್ತಿ ಎಚ್.ಕೆ | ಸದಸ್ಯರು | |
| 7. | ಡಾ. ವರದರಾಜ ಸಿ. ಎಸ್. | ಸದಸ್ಯರು | |
| 8. | ಶ್ರೀ ಫಾದರ್ ಮೈಕಲ್ ಸಂತುಮಯೋರ್ | ಸದಸ್ಯರು | |
| 9. | ಡಾ. ಜೋಶ್ನ ರಾವ್ ಕೆ. | ಸದಸ್ಯರು | |
| 10. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು | |
| 11. | ಶ್ರೀ ಸಿ. ಎ. ನಿತಿನ್ ಜೆ. ಶೆಟ್ಟಿ | ಸದಸ್ಯರು | |
| 12. | ಶ್ರೀಮತಿ ಜುಡಿತ್ ಮೆಂಡೋನ್ಸ್ | ಸದಸ್ಯರು | |
| 13. | ಶ್ರೀ ರಘುರಾಜ್ | ಸದಸ್ಯರು | |
| 14. | ಶ್ರೀ ಅಚ್ಯುತ ಗಟ್ಟಿ | ಸದಸ್ಯರು | |
| 15. | ಶ್ರೀ ಮೊಹಮ್ಮದ್ ಸವಾದ್ | ಸದಸ್ಯರು | |
| 16. | ಡಾ. ಸಂದೇಶ್ ಕೆ. ಯಸ್.<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು | |
| 17. | ಪ್ರೊ. ದೇವೇಂದ್ರಪ್ಪ ಹೆಚ್.<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 18. | ಪ್ರೊ. ವೈ. ಸಂಗಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 19. | ಶ್ರೀ ಕೆ. ರಾಜು ಮೊಗವೀರ, ಕೆ.ಎ.ಎಸ್.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

ಪ್ರಾಸ್ತಾವಿಕ

**ಪ್ರಾರಂಭದಲ್ಲಿ ಮಾನ್ಯ ಕುಲಪತಿಗಳು ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.**

1. ಮಂಗಳೂರು ವಿಶ್ವವಿದ್ಯಾನಿಲಯದ 42 ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮಕ್ಕೆ ಸಹಕರಿಸಿದ ಎಲ್ಲಾ ಸಿಂಡಿಕೇಟು ಸದಸ್ಯರುಗಳಿಗೆ ಧನ್ಯವಾದಗಳನ್ನು ಸಲ್ಲಿಸಿದರು.
2. ಮುಂದಿನ ದಿನಗಳಲ್ಲಿ ಘಟಿಕೋತ್ಸವ ಕಾರ್ಯಕ್ರಮದ Minute to Minute programme ನ್ನು ಎಲ್ಲರಿಗೂ ವಿತರಿಸಲಾಗುವುದೆಂಬುದಾಗಿ ತಿಳಿಸಿದರು.
3. ಕೇಂದ್ರ ಸರ್ಕಾರದ P. M. USHA ಯೋಜನೆಯಡಿ ಮಂಗಳೂರು ವಿಶ್ವವಿದ್ಯಾನಿಲಯದಕ್ಕೆ ಅನುದಾನ ಬಿಡುಗಡೆಯಾಗಿರುವ ವಿಚಾರವನ್ನು ಸಭೆಗೆ ತಿಳಿಸಿದರು.
4. ದಿನಾಂಕ 27.06.2024 ರಿಂದ 29.06.2024ರವರೆಗೆ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿದ್ಯಾರ್ಥಿಗಳ “ಸಂಭ್ರಮ” ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದರಿಂದ ಸದರಿ ದಿನಗಳಂದು ಕ್ಯಾಂಪಸ್‌ನ ಎಲ್ಲಾ ಸ್ನಾತಕೋತ್ತರ ತರಗತಿಗಳನ್ನು ರದ್ದುಗೊಳಿಸಲಾಗುವುದೆಂಬುದಾಗಿ ಸಭೆಗೆ ತಿಳಿಸಿದರು.
5. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ ಕಾರ್ಯಕ್ರಮಗಳ ಪರೀಕ್ಷೆಗಳು 24.06.2024ರಿಂದ ಪ್ರಾರಂಭಗೊಳ್ಳಲಿರುವ ವಿಚಾರವನ್ನು ಸಭೆಗೆ ತಿಳಿಸಿದರು.

## I. ನಡವಳಿಗಳ ದೃಢೀಕರಣ

1. ದಿನಾಂಕ 07.06.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

ದಿನಾಂಕ 07.06.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಯನ್ನು ಈ ಕೆಳಗಿನ ತಿದ್ದುಪಡಿಗಳೊಂದಿಗೆ ಅನುಮೋದಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಪ.ಜಾ.ಪ.ಪಂ.ಘಟಕ: ಸಾ.ಸ 2:5(2024) |
| ವಿಷಯ: | ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಘಟಕಗಳ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಷ್ಠಾನಗೊಳಿಸುವ ಬಗ್ಗೆ. |
| ತಿದ್ದುಪಡಿ ನಿರ್ಣಯ: | ವಿಶ್ವವಿದ್ಯಾನಿಲಯದ ಆರ್ಥಿಕ ಸ್ಥಿತಿಗತಿಗಳಿಗೆ ಒಳಪಟ್ಟು ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಷ್ಠಾನಗೊಳಿಸಲು ನಿರ್ಣಯಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಸಿಂಡಿಕೇಟು: ಸಾ.ಸ** 2:43(2024) |
| ವಿಷಯ: | ಪ್ರೊ. ಎಂ. ಜಯಶಂಕರ್, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ. |
| ತಿದ್ದುಪಡಿ ನಿರ್ಣಯ: | ಪ್ರೊ. ಎಂ. ಜಯಶಂಕರ್, ಪ್ರಾಧ್ಯಾಪಕರು, ಸೂಕ್ಷ್ಮಾಣು ಜೀವ ವಿಜ್ಞಾನ ವಿಭಾಗ, ಸ್ನಾತಕೋತ್ತರ ಕೇಂದ್ರ ಚಿಕ್ಕಅಳುವಾರ ಇವರ ಸೇವೆಯನ್ನು ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಸೂಕ್ಷ್ಮಾಣು ಜೀವವಿಜ್ಞಾನ ವಿಭಾಗಕ್ಕೆ ಈ ಕೆಳಗಿನ ಅಂಶಗಳ ಆಧಾರದ ಮೇಲೆ ವರ್ಗಾಯಿಸುವ ನಿರ್ಣಯವನ್ನು ಕೈಗೊಳ್ಳಲಾಯಿತು. |

1. ಸ್ನಾತಕೋತ್ತರ ಕೇಂದ್ರ ಚಿಕ್ಕ ಆಳುವಾರದಲ್ಲಿ ಪೂರ್ಣಕಾಲಿಕವಾಗಿ ಇನ್ನೂ ನಾಲ್ಕು ಬೋಧಕ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು ಅಗತ್ಯ ಕಾರ್ಯಭಾರದ ಕೊರತೆ.
2. ಮಂಗಳಗಂಗೋತ್ರಿಯಲ್ಲಿರುವ ಸೂಕ್ಷ್ಮಾಣು ಜೀವ ವಿಜ್ಞಾನ ವಿಭಾಗದಲ್ಲಿ ಕಾರ್ಯಭಾರವಿದ್ದರೂ ಖಾಯಂ ಪ್ರಾಧ್ಯಾಪಕರು ಇಲ್ಲದೆ ಇರುವುದು.
3. ಕೊಡಗು ವಿಶ್ವವಿದ್ಯಾನಿಲಯವು ಪ್ರೊ. ಎಂ. ಜಯಶಂಕರ್‌ರವರನ್ನು ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸುವ ಕುರಿತು ನೀಡಿರುವ ನಿರಾಕ್ಷೇಪಣಾ ಪತ್ರ.
4. ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ NAAC ಮಾನ್ಯತೆ ಹಿತದೃಷ್ಟಿಯಿಂದ ಪೂರ್ಣಕಾಲಿಕ ಪ್ರಾಧ್ಯಾಪಕರ ಅವಶ್ಯಕತೆ ಕಂಡು ಬಂದಿದ್ದು, ಈ ವರ್ಗಾವಣೆಯಿಂದ ವಿಭಾಗದ ಶೈಕ್ಷಣಿಕ ಹಾಗೂ ಸಂಶೋಧನೆಗೆ ಅನುಕೂಲವಾಗುತ್ತದೆ.
5. ಪ್ರೊ. ಎಂ. ಜಯಶಂಕರ್‌ರವರು ದಿನಾಂಕ 30.04.2026 ರಂದು ವಯೋನಿವೃತ್ತಿ ಹೊಂದಲಿದ್ದು ಕೇವಲ ಎರಡು ವರ್ಷಗಳಿಗಿಂತಲೂ ಕಡಿಮೆ ಸೇವಾವಧಿಯನ್ನು ಹೊಂದಿರುತ್ತಾರೆ.

## II. ಅನುಸರಣಾ ವರದಿಯ ಅನುಮೋದನೆ

1. ದಿನಾಂಕ 23.02.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.

- ಅನುಮೋದಿಸಲಾಯಿತು. -

## III. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಎಸಿಸಿ:ಸಾ.ಸ.3:1 (2024)** |
| ವಿಷಯ: | ಸೈಂಟ್ ಫಿಲೋಮಿನಾ ಕಾಲೇಜು, ಪುತ್ತೂರು ಎಂಬ ವಿದ್ಯಾಸಂಸ್ಥೆಗೆ ಸ್ವಾಯತ್ತ ಸ್ಥಾನಮಾನ ನೀಡುವ ಬಗ್ಗೆ. |
| ನಿರ್ಣಯ: | ದಿನಾಂಕ 19.06.2024ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಸಾ.ಸ.3:2 (2024)**

ವಿಷಯ: ಡಾ.ಎನ್.ಕರುಣಾಕರ, ಹಿರಿಯ ಪ್ರಾಧ್ಯಾಪಕರು ಹಾಗೂ ಸಂಯೋಜಕರು, CARER, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ IAEA, Vienna ಇಲ್ಲಿ Final Research Coordination Meeting (RCM) ನಲ್ಲಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಮುಂದುವರಿದು, ಸದರಿಯವರನ್ನು ಸಿಂಡಿಕೇಟು ಸಭೆಯು ಅಭಿನಂದಿಸಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಸಾ.ಸ.3:3 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯಕ್ಕೆ ನಿರ್ದೇಶಕರನ್ನು ನೇಮಕ ಮಾಡಿರುವ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.3:4 (2024)

ವಿಷಯ: ಶ್ರೀ ರಘುರಾಜ್, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆಗಳು

ಕ್ರಮ ಸಂಖ್ಯೆ:1 ಸಾಮಾಜಿಕ ಸುಧಾರಕರು ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅನೇಕ ಶಾಲೆ, ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ, 19ನೇ ಶತಮಾನದಲ್ಲಿ ಅಸ್ಪೃಶ್ಯರ, ಹಿಂದುಳಿದ ಸಮಾಜಕ್ಕೆ ಶಿಕ್ಷಣದ ಕ್ರಾಂತಿಕಾರಿ ಚಳುವಳಿಯಿಂದ ಅದೆಷ್ಟೋ ದೀನದಲಿತರಿಗೆ ವಿದ್ಯಾದಾನ, ಭೂದಾನ ಮಾಡಿದ ಪೂಜ್ಯನೀಯ ಕುದ್ಮಲ್ ರಂಗರಾಯರ ಪೀಠವನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಬೇಕೆಂದು ಮನವಿ ಹಾಗೂ ಜೂನ್ 29ರಂದು ನಡೆಯುವ ಕುದ್ಮುಲ್ ರಂಗರಾವ್ ಜಯಂತಿ ಆಚರಣೆಯನ್ನು ಪ್ರತೀ ವರ್ಷವೂ ವಿಶ್ವವಿದ್ಯಾನಿಲಯದ ಎಲ್ಲಾ ಕಾಲೇಜುಗಳಲ್ಲಿ ಆಚರಿಸಲು ಆದೇಶ ಜಾರಿ ಮಾಡಬೇಕಾಗಿ ಕೋರಿಕೆ.

ನಿರ್ಣಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕುದ್ಮುಲ್ ರಂಗರಾಯರ ಪೀಠವನ್ನು ಸ್ಥಾಪಿಸುವ ಬಗ್ಗೆ ನಿಯಮಾನುಸಾರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ನಿರ್ಣಯಿಸಲಾಯಿತು.

ಕ್ರಮ ಸಂಖ್ಯೆ:2 ಹೊರಗುತ್ತಿಗೆ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದಿಂದ ನೇಮಕ ಮಾಡುವ ತಾತ್ಕಾಲಿಕ ನೌಕರರ ನೇಮಕಾತಿ ಅಥವಾ ನೇಮಕಾತಿ ರದ್ದತಿಯ ವಿಷಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸಿಗುವ ಶೇಕಡಾವಾರು ಹುದ್ದೆಗಳನ್ನು ಯಾವುದೇ ಸಮಸ್ಯೆಗಳಿಲ್ಲದೆ ನ್ಯಾಯಸಮ್ಮತ ನಿಯಮಗಳನ್ನು ಪಾಲಿಸಬೇಕಾಗಿ ಕೋರಿಕೆ.

ನಿರ್ಣಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಹೊರಗುತ್ತಿಗೆ / ತಾತ್ಕಾಲಿಕ ನೆಲೆಯಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡುವಾಗ ಸರಕಾರದ ಆದೇಶಗಳನ್ನು ಪಾಲಿಸಲಾಗುವುದೆಂಬುದಾಗಿ ಸಭೆಗೆ ತಿಳಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.3:5 (2024)

ವಿಷಯ: ಶೈಕ್ಷಣಿಕ ವರ್ಷ 2024-25ನೇ ಸಾಲಿಗೆ ವಿಸ್ತರಣಾ / ಹೊಸ ಶಾಶ್ವತ / ಶಾಶ್ವತ ಸಂಯೋಜನೆ ಮುಂದುವರಿಕೆ ಮಂಜೂರು ಮಾಡುವ ಬಗ್ಗೆ.

ನಿರ್ಣಯ: ದಿನಾಂಕ 19.06.2024ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಶ್ರೀ ವೆಂಕಟರಮಣ ಸ್ವಾಮಿ ಕಾಲೇಜು, ಬಂಟ್ವಾಳ ಇಲ್ಲಿಗೆ ಶಾಶ್ವತ ಸಂಯೋಜನೆ ಬದಲು ಮುಂದುವರಿಕೆ ಸಂಯೋಜನೆ ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.3:6 (2024)

ವಿಷಯ: ಶೈಕ್ಷಣಿಕ ವರ್ಷ 2024-25ನೇ ಸಾಲಿಗೆ ಮುಂದುವರಿಕೆ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

ನಿರ್ಣಯ: ದಿನಾಂಕ 19.06.2024ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.3:7 (2024)

ವಿಷಯ: ಶ್ರೀ ಭಾರತೀ ಕಾಲೇಜು, ನಂತೂರು, ಮಂಗಳೂರು ಎಂಬ ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2024-25ನೇ ಸಾಲಿನಿಂದ ಹೊಸ ಸಂಯೋಜನೆ ಮಂಜೂರಾತಿ ನೀಡುವ ಬಗ್ಗೆ.

ನಿರ್ಣಯ: ದಿನಾಂಕ 19.06.2024ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿ :ಸಾ.ಸ.3:8 (2024)

ವಿಷಯ: ಎಸ್.ಸಿ.ಎಸ್. ಪ್ರಥಮ ದರ್ಜೆ ಕಾಲೇಜು, ಕೆಇಸಿಟಿ ಟವರ್ಸ್, ಅಶೋಕನಗರ, ಹೊಯ್ಗೆಬೈಲು, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ.

ನಿರ್ಣಯ: ದಿನಾಂಕ 19.06.2024ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಡಿ :ಸಾ.ಸ.3:9 (2024) |
| ವಿಷಯ: | ತ್ರಿಶಾ ಕಾಲೇಜ್ ಆಫ್ ಕಾಮರ್ಸ್ ಆಂಡ್ ಮ್ಯಾನೇಜ್‌ಮೆಂಟ್, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ. |
| ನಿರ್ಣಯ: | ದಿನಾಂಕ 19.06.2024ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಸಿಡಿಸಿ:ಸಾ.ಸ.3:10 (2024)** |
| **ವಿಷಯ:** | ತ್ರಿಶಾ ಸಂಧ್ಯಾ ಕಾಲೇಜು, ಕುದ್ರೋಳಿ, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ. |
| **ನಿರ್ಣಯ:** | ದಿನಾಂಕ 19.06.2024ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಸಿಂಡಿಕೇಟು:ಸಾ.ಸ.3:11 (2024)** |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಮಾಜಶಾಸ್ತ್ರ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರ ನೇಮಕಾತಿ ಬಗ್ಗೆ. |
| ನಿರ್ಣಯ: | ಡಾ. ಗೋವಿಂದ ರಾಜು ಬಿ. ಎಂ., ಸಹ ಪ್ರಾಧ್ಯಾಪಕರು ಇವರನ್ನು ದಿನಾಂಕ 01.07.2024ರಿಂದ ಅನ್ವಯವಾಗುವಂತೆ ಮುಂದಿನ ಎರಡು ವರ್ಷಗಳ ಅವಧಿಗೆ ಸ್ನಾತಕೋತ್ತರ ಸಮಾಜಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕಾತಿ ಮಾಡಲಾಯಿತು. |

**ಇತರ ವಿಷಯಗಳು**

1. ದಿನಾಂಕ 09.10.2020ರಂದು ನಡೆದ ಸಿಂಡಿಕೇಟಿನ 2020ನೇ ಸಾಲಿನ ಐದನೇ ಸಾಮಾನ್ಯ ಸಭೆಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟು ಸಭೆಗಳನ್ನು ಪೂರ್ವಾಹ್ನ ಗಂಟೆ 10.00 ಗಂಟೆಗೆ ನಡೆಸಬೇಕೆಂಬುದಾಗಿ ನಿರ್ಣಯಿಸಲಾಗಿರುತ್ತದೆ. ಆದರೆ, ಇನ್ನು ಮುಂದಕ್ಕೆ ಸಿಂಡಿಕೇಟು ಸಭೆಗಳನ್ನು ಪೂರ್ವಾಹ್ನ ಗಂಟೆ 10.30 ಕ್ಕೆ ನಡೆಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ನಿರ್ಣಯಿಸಲಾಯಿತು. ಮುಂದುವರಿದು, ಸಭೆಗೆ ಮಂಡಿಸುವ ಎಲ್ಲಾ ಕಾರ್ಯಸೂಚಿಗಳನ್ನು ನಿಗದಿತ ಸಮಯದೊಳಗೆ ವಿಸ್ತೃತವಾಗಿ ಚರ್ಚಿಸಿ ನಿರ್ಣಯಗಳನ್ನು ಕೈಗೊಳ್ಳಬೇಕೆಂಬುದಾಗಿಯೂ ನಿರ್ಣಯಿಸಲಾಯಿತು.

2. Dr. Tumbay Moideen ಇವರಿಗೆ ಘಟಿಕೋತ್ಸವ ದಿನದಂದು ಗೌರವ ಡಾಕ್ಟರೇಟ್ ಪದವಿಯನ್ನು ಪ್ರದಾನ ಮಾಡಲು ಸಾಧ್ಯವಾಗದಿರುವುದರಿಂದ ಸದರಿಯವರಿಗೆ ಸಿಂಡಿಕೇಟು ಸಭೆಯ ದಿನದಂದೇ ಗೌರವ ಡಾಕ್ಟರೇಟ್ ಪದವಿಯನ್ನು ಪ್ರದಾನ ಮಾಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

3. IQAC ನಿರ್ದೇಶಕರು ಪ್ರತಿ ತಿಂಗಳ ವರದಿಯನ್ನು ಸಿಂಡಿಕೇಟು ಸಭೆಯ ಕೊನೆಯಲ್ಲಿ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

4. ಮಂಗಳೂರು ವಿಶ್ವವಿದ್ಯಾನಿಲಯದ 2022-23ನೇ ಸಾಲಿನ ವಾರ್ಷಿಕ ವರದಿಯ ಮುಖ್ಯಾಂಶಗಳ ವರದಿಯನ್ನು ಮುಂದಿನ ಸಿಂಡಿಕೇಟು ಸಭೆಯಲ್ಲಿ ಮಂಡಿಸಲು ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನರಾದ ಪ್ರೊ. ಎಂ. ಜಯಶಂಕರ್ ಇವರಿಗೆ ತಿಳಿಸಲಾಯಿತು.

5. ಮಂಗಳೂರು ವಿಶ್ವವಿದ್ಯಾನಿಲಯವು ಎದುರಿಸುತ್ತಿರುವ ಆರ್ಥಿಕ ಹೊರೆಗೆ ಸಂಬಂಧಿಸಿ, ಎಲ್ಲೆಲ್ಲಿ ವಿಶ್ವವಿದ್ಯಾನಿಲಯವು ಆರ್ಥಿಕ ಹೊರೆಯನ್ನು ಎದುರಿಸುತ್ತಿದೆ ಎಂಬ ಬಗೆಗಿನ ಸಂಪೂರ್ಣ ವರದಿಯನ್ನು ಸಿಂಡಿಕೇಟು ಸಭೆಗೆ ಮಂಡಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಈ ಬಗ್ಗೆ ಚರ್ಚಿಸಲು ಸಿಂಡಿಕೇಟಿನ ವಿಶೇಷ ಸಭೆಯನ್ನು ನಡೆಸಲು ಕ್ರಮ ಕೈಗೊಳ್ಳಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು. ಇದರೊಂದಿಗೆ ವಿಶ್ವವಿದ್ಯಾನಿಲಯದಲ್ಲಿ ಆಂತರಿಕ ಅಡಿಟ್ ಕಾರ್ಯವನ್ನು ಪ್ರತಿ ತಿಂಗಳು ನಡೆಸಿ ವರದಿಯನ್ನು ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

6. ಶ್ರೀ ಅಚ್ಯುತ ಗಟ್ಟಿ, ಮಾನ್ಯ ಸಿಂಡಿಕೇಟು ಸದಸ್ಯರು, ಇವರು ದಿನಾಂಕ 23.02.2024ರಂದು ನಡೆದ ಸಿಂಡಿಕೇಟು ಸಭೆಯಲ್ಲಿ ಮಂಡಿಸಿರುವ ಪ್ರಸ್ತಾವನೆಗಳಿಗೆ ಸಂಬಂಧಿಸಿದ ಕಾರ್ಯಸೂಚಿ ಸಂಖ್ಯೆ ಸಿಂಡಿಕೇಟು:ಸಾ.ಸ.1:13(2024) ರಲ್ಲಿ ಕೈಗೊಂಡಿರುವ ನಿರ್ಣಯಗಳ ಅನುಸರಣಾ ವರದಿಯಲ್ಲಿ ಕೈಗೊಂಡಿರುವ ಕ್ರಮಗಳ ಬಗೆಗಿನ ವಿವರವಾದ ಮಾಹಿತಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

7. ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಚಟುವಟಿಕೆಗಳು, ಶೈಕ್ಷಣಿಕ ಸಾಧನೆಗಳು ಅಥವಾ ಇನ್ನಿತರ ಪ್ರಗತಿಪರ ಕಾರ್ಯಗಳನ್ನು ಸಾಮಾಜಿಕ ಜಾಲತಾಣಗಳು/ಮಾಧ್ಯಮಗಳಲ್ಲಿ ಪ್ರಚುರಪಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

8. ಮಂಗಳೂರು ವಿಶ್ವವಿದ್ಯಾನಿಲಯದ ಮಾನ್ಯ ಸಿಂಡಿಕೇಟು ಸದಸ್ಯರುಗಳನ್ನು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಸ್ಥಳ ಬದಲಾವಣೆಗೆ ಸಂಬಂಧಪಟ್ಟ ಸ್ಥಳೀಯ ವಿಚಾರಣಾ ಸಮಿತಿಗಳಿಗೆ ಸದಸ್ಯರುಗಳನ್ನಾಗಿ ನೇಮಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

9. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಶ್ರೀ ಬಸವಣ್ಣ ಅಧ್ಯಯನ ಪೀಠವನ್ನು ಸ್ಥಾಪಿಸುವ ಬಗ್ಗೆ ನಿಯಮಾನುಸಾರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ನಿರ್ಣಯಿಸಲಾಯಿತು.

10. ಮಂಗಳೂರು ವಿಶ್ವವಿದ್ಯಾನಿಲಯದ ಕ್ರೀಡಾ ಶುಲ್ಕದ ವಿವರಗಳನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

11. ಮಂಗಳೂರು ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಸೇವಾ ಸಂಯೋಜನಾಧಿಕಾರಿಯ (NSS Co-ordinator) ನೇಮಕಾತಿ ಪ್ರಕ್ರಿಯೆಯನ್ನು ಶೀಘ್ರದಲ್ಲಿ ನಡೆಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

12. ಶೈಕ್ಷಣಿಕ ವರ್ಷ 2024-25ನೇ ಸಾಲಿಗೆ ಕಾಲೇಜುಗಳಿಂದ ಬೇಡಿಕೆ ಬಂದಲ್ಲಿ ಅನುಮೋದಿತ ವಿದ್ಯಾರ್ಥಿ ಪರಿಮಿತಿಯ ಮೇಲೆ ಶೇಕಡ 10ರಷ್ಟು ಹೆಚ್ಚುವರಿಯಾಗಿ ವಿದ್ಯಾರ್ಥಿ ಪರಿಮಿತಿಯನ್ನು ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

13. ಹಲವಾರು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಡಳಿತ ಸಿಬ್ಬಂದಿಗಳನ್ನು ಆಂತರಿಕವಾಗಿ ವರ್ಗಾವಣೆ ಮಾಡುವುದು ಮತ್ತು ಆ ಮುಖಾಂತರ ಎಲ್ಲರಿಗೂ ಆಡಳಿತದ ವಿವಿಧ ಮಜಲುಗಳ ಅನುಭವ ದೊರಕಿದಂತೆ ಆಗುತ್ತದೆ ಎಂಬ ನಿರ್ಣಯವನ್ನು ಕೈಗೊಳ್ಳಲಾಯಿತು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| ಕುಲಸಚಿವರು | ಕುಲಪತಿಗಳು. |